ಆಳಂದ ತಾಲ್ಲೂಕಿನ ಯಳಸಂಗಿ ಗ್ರಾಮಕ್ಕೆ ಗಡಿ ಅಭಿವೃದ್ಧಿ ಯೋಜನೆ ಅಡಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ.

1839 - ಶ್ರೀ ಸುಭಾಶ್ ಗುತ್ತೇದಾರ್ (ಆಳಂದ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಆಳಂದ ತಾಲ್ಲೂಕಿನ ಯಳಸಂಗಿ ಗ್ರಾಮಕ್ಕೆ ಸುಮಾರು ವರ್ಷಗಳಿಂದ ಗಡಿನಾಡ ಅಭಿವೃದ್ಧಿ ಯೋಜನೆ ಅಡಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವು ಸುರಪುರ ತಾಲ್ಲೂಕಿನ ಯದುನೂರು ಗ್ರಾಮದಿಂದ ಸ್ಥಳಾಂತರಗೊಂಡ ಆದೇಶವು ಬಂದಿದ್ದು, ಇಲ್ಲಿಯವರೆಗೆ ಕಾರ್ಯಗತಗೊಂಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಬಂದಿದ್ದರೆ, ಈ ಬಗ್ಗೆ ಏನು ಕ್ರಮ ಕೈಗೊಳ್ಳಲಾಗಿದೆ?*

ಡಾ|| ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿಲ್ಲ.

ಆ) ಯಳಸಂಗಿ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರು ಮಾಡಲು ಜಿಲ್ಲಾ ಪಂಚಾಯತ್ ಅನುಮೋದನೆಯೊಂದಿಗೆ ಪ್ರಸ್ತಾವನೆ ಬಂದಲ್ಲಿ ಪರಿಗಣಿಸಲಾಗುವುದು.

ಸಾರ್ವಜನಿಕ ಆಸ್ಪತ್ರೆ ಹಾಗೂ ಪ್ರಾಥಮಿಕ ಕೇಂದ್ರಗಳಲ್ಲಿ ಔಷಧ ಸರಬರಾಜು ಕೊರತೆ.

1840 - ಶ್ರೀ ಯು. ಆರ್. ಸಭಾಪತಿ (ಉಡುಪಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದ ಬಹಳಷ್ಟು ಸಾರ್ವಜನಿಕ ಆಸ್ಪತ್ರೆ ಪ್ರಾಥಮಿಕ ಕೇಂದ್ರಗಳಲ್ಲಿ ಔಷಧ ಸರಬರಾಜಿನ ಕೊರತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಸರ್ಕಾರವು ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು).*

ಶ್ರೀ ಡಾ|| ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಸಾರ್ವಜನಿಕ ಗ್ರಂಥಾಲಯಗಳಲ್ಲಿ ಪುಸ್ತಕಗಳ ಖರೀದಿ.

1841 - ಶ್ರೀ ಯು. ಆರ್. ಸಭಾಪತಿ (ಉಡುಪಿ) : ಮಾನ್ಯ ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1996-97, 1997-98ನೇ ಸಾಲಿನಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಎಷ್ಟು ಸಾವಿರ ರೂಪಾಯಿಗಳ ಪುಸ್ತಕಗಳನ್ನು ಖರೀದಿಸಲಾಗಿದೆ? (ವಿವರ ನೀಡುವುದು)*

ಅ) ಒಮ್ಮೆ ಖರೀದಿಸಿದ ಪುಸ್ತಕಗಳನ್ನೇ ಖರೀದಿಸಲಾಗಿದೆಯೆ ಹಾಗಿದ್ದಲ್ಲಿ ಮಾಹಿತಿ ನೀಡುವುದು?

ಶ್ರೀ ಆರ್. ಕೃಷ್ಣಪ್ಪ (ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು) :

ಅ) 1996-97ನೇ ಸಾಲಿನಲ್ಲಿ ರೂ.222.52 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ.1997-98ನೇ ಸಾಲಿನ ಪೂರ್ಣ ಮಾಹಿತಿ ಮಾರ್ಚ್ 1998ರ ನಂತರವೇ ದೊರೆಯುವುದು.

ಆ) ಇಲ್ಲ. ಆದರೂ ಓದುಗರ ಬೇಡಿಕೆಗನುಗುಣವಾಗಿ ಜನಪ್ರಿಯ ಪುನರ್ ಮುದ್ರಿತ ಗ್ರಂಥಗಳನ್ನು ಖರೀದಿಸಲಾಗಿತ್ತಿದೆ.

ಚಿಂಚೋಳಿ ತಾಲ್ಲೂಕಿನ ಅರಣ್ಯ ಪ್ರದೇಶಗಳ ಜಮೀನಿನ ಸಕ್ರಮ.

1843 - ಶ್ರೀ ವೈಜ್ಯನಾಥ ಪಾಟೀಲ್ (ಚಿಂಚೋಳಿ) : ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಂಚೋಳಿ ತಾಲ್ಲೂಕಿನಲ್ಲಿರುವ ಅರಣ್ಯ ಪ್ರದೇಶಗಳಲ್ಲಿ ರೈತರು ಅಕ್ರಮವಾಗಿ ಸಾಗುವಳಿ ಮಾಡಿರುವ ಭೂಮಿಯ ವಿಸ್ತೀರ್ಣವೆಷ್ಟು?

ಆ) ಅವುಗಳನ್ನು ಸಕ್ರಮಗೊಳಿಸಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಅರಣ್ಯ ಸಚಿವರು) :

ಅ) ಚಿಂಚೋಳಿ ತಾಲ್ಲೂಕಿನಲ್ಲಿ 649.08 ಹೆಕ್ಟೇರ್‌ನಷ್ಟು ಅರಣ್ಯ ಪ್ರದೇಶವನ್ನು ರೈತರು ದಿನಾಂಕ 27.4.78ಕ್ಕಿಂತ ಪೂರ್ವದಿಂದಲೂ ಅಕ್ರಮವಾಗಿ ಸಾಗುವಳಿ ಮಾಡಿರುತ್ತಾರೆ.

ಆ) ದಿನಾಂಕ 27.4.78ರ ಪೂರ್ವದ ಅತಿಕ್ರಮಣವನ್ನು ಸಕ್ರಮಗೊಳಿಸಲು ಅರಣ್ಯ (ಸಂರಕ್ಷಣಾ) ಕಾಯ್ದೆ 1960ರ ರೀತ್ಯ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿತ್ತು. ಕೇಂದ್ರ ಸರ್ಕಾರವು ತನ್ನ ಪತ್ರ ಸಂಖ್ಯೆ8-50:95 ಎಫ್‌ಸಿ, ದಿನಾಂಕ 15.5.96ರಲ್ಲಿ ಕೆಲವೊಂದು ನಿಬಂಧನೆ:ಷರತ್ತುಗಳಿಗೆ ಒಳಪಟ್ಟು ಅನುಮೋದನೆ ನೀಡಿರುತ್ತಾರೆ. ಈ ಬಗ್ಗೆ ರಾಜ್ಯ ಸರ್ಕಾರ ಆದೇಶ ಸಂಖ್ಯೆ ಅಪಜೀ 5 ಎಫ್‌ಜಿಎಲ್ 90 ದಿನಾಂಕ 5.5.97ರಲ್ಲಿ ಕೇಂದ್ರ ಸರ್ಕಾರದ ಷರತ್ತುಗಳನ್ನು ನಿಬಂಧಿಸಿ ಸಕ್ರಮಗೊಳಿಸಲು ಆದೇಶ ಹೊರಡಿಸಿದೆ. ಅದರಂತೆ ಸದರಿ ಆದೇಶದ ಪ್ರಕಾರ 27.4.1978ಕ್ಕೆ ಮುನ್ನ ಆ ಒತ್ತುವರಿಗಳನ್ನು ಸಕ್ರಮಗೊಳಿಸಲು ಕ್ರಮವನ್ನು ಕೈಗೊಳ್ಳಲಾಗುತ್ತಿದೆ.

ದೈಹಿಕ ಶಿಕ್ಷಕರ ಹುದ್ದೆಗಳ ನೇಮಕಾತಿ.

1845 - ಶ್ರೀ ವಿಶ್ವೇಶ್ವರ ಹೆಗಡೆ (ಅಂಕೋಲ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಒಟ್ಟು ದೈಹಿಕ ಶಿಕ್ಷಕರ ಹುದ್ದೆಗಳು ಎಷ್ಟು ಖಾಲಿ ಇವೆ? ಅವು ಎಲ್ಲೆಲ್ಲಿ ಇವೆ? (ವಿವರವಾದ ಮಾಹಿತಿ ನೀಡುವುದು)